2354(2956)

ಶ್ರೀ ಕಟ್ಟಾಸುಬ್ರಮಣ್ಯನಾಯ್ಡು(ಶಿವಾಜಿನಗರ):ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಕೇಂದ್ರದಲ್ಲಿ ಸರಾಸರಿ ಪ್ರತಿ ವರ್ಷ ಎಷ್ಟು ಕಂಜೆನಿಟಲ್ ಹೃದ್ರೋಗ ಮಕ್ಕಳಿಗೆ ಉಚಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ?

ಆ) ಮುಖ್ಯಮಂತ್ರಿಗಳ ವೈದ್ಯಕೀಯ ಪರಿಹಾರ ನಿಧಿಯಿಂದ 1999-2000ನೇ ಸಾಲಿನಲ್ಲಿ ಉಚಿತ ಚಿಕಿತ್ಸೆ ನೀಡಲು ಒದಗಿಸಿದ ಹಣವೆಷ್ಟು?

ಇ) ಅನೇಕ ಸಂಘ ಸಂಸ್ಥೆಗಳು ಹಾಗೂ ದಾನಿಗಳಿಂದ ಆರ್ಥಿಕ ನೆರವನ್ನು ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಕೇಂದ್ರದಲ್ಲಿ ಮಕ್ಕಳ ಹೃದ್ರೋಗ ವಿಭಾಗವು ನವಂಬರ್ 98ರಂದು ಪ್ರಾರಂಭವಾಗಿದ್ದು ನವಂಬರ್ 98ರಿಂದ ಮಾರ್ಚ್ 2000ರವರೆಗೆ 119 ಕಂಜೆನಿಟಲ್ ಹೃದ್ರೋಗ ಮಕ್ಕಳಿಗೆ ಉಚಿತ ಚಿಕಿತ್ಸೆಯನ್ನು ನೀಡಲಾಗಿದೆ.

ಆ) ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಸಂಸ್ಥೆಗೆ 1999-2000ನೇ ಸಾಲಿನಲ್ಲಿ ಉಚಿತ ಚಿಕಿತ್ಸೆ ನೀಡಲು ಮುಖ್ಯಮಂತ್ರಿಗಳ ವೈದ್ಯಕೀಯ ಪರಿಹಾರ ನಿಧಿಯಿಂದ ರೂ. 100.00 ಲಕ್ಷಗಳನ್ನು ಮಂಜೂರು ಮಾಡಲಾಗಿರುತ್ತದೆ.

ಇ) ಸಂಘ ಸಂಸ್ಥೆಗಳು ಹಾಗೂ ದಾನಿಗಳಿಂದ ಆರ್ಥಿಕ ನೆರವನ್ನು ಪಡೆಯಲು ಸಂಬಂಧಪಟ್ಟವರಿಗೆ ಸರ್ಕಾರದಿಂದ ಸೂಚನೆ ನೀಡಲಾಗಿದೆ.

ಸ್ಟಾಫ್ ನರ್ಸ್ ಹುದ್ದೆಗಳನ್ನು ಭರ್ತಿ ಮಾಡುವುದು.

2355(2954)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಖಾಲಿ ಇರತಕ್ಕ ಸ್ಟಾಫ್ ನರ್ಸ್‌ಗಳ ಸಂಖ್ಯೆ ಎಷ್ಟು?

ಆ) 276 ನರ್ಸ್‌ಗಳ ಆಯ್ಕೆ ಪಟ್ಟಿಯನ್ನು 4-7-1998ರಂದು ಪ್ರಕಟಿಸಿದ್ದು ಇದುವರೆಗೆ ಆಯ್ಕೆಯಾದ ನರ್ಸ್‌ಗಳಿಗೆ ನೇಮಕಾತಿ ಆದೇಶವನ್ನು ನೀಡದೇ ಇರಲು ಕಾರಣಗಳೇನು?

ಇ) ಖಾಲಿ ಇರತಕ್ಕ ಎಲ್ಲಾ ನರ್ಸ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 823 ಶುಶ್ರೂಷಕ ಹುದ್ದೆಗಳು ಖಾಲಿ ಇವೆ. ಈ ಖಾಲಿ ಇರುವ ಶುಶ್ರೂಷಕರ ಹುದ್ದೆಗಳ ಪೈಕಿ 541 ಹುದ್ದೆಗಳು ಇಎಸ್‌ಐ ಆಸ್ಪತ್ರೆಗಳು ಮತ್ತು ಇತರ ಸ್ವಾಯತ್ತ ಸಂಸ್ಥೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

ಆ) ಸರ್ಕಾರಿ ಆದೇಶ ಸಂಖ್ಯೆ: ಆಕುಕ 133 ವಿಬಾನೆ 97 ದಿನಾಂಕ 30.7.1997ರಲ್ಲಿ ಕರ್ನಾಟಕ ಲೋಕ ಸೇವಾ ಆಯೋಗದಿಂದ ವಿನಾಯಿತಿಪಡಿಸಿ ವಿಶೇಷ ಸಂದರ್ಭವೆಂದು ಪರಿಗಣಿಸಿ 1687 ಶುಶ್ರೂಷಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು. ಅದರನ್ವಯ 1633 ಹುದ್ದೆಗಳನ್ನು ಆಯ್ಕೆ ಮಾಡಿ ದಿನಾಂಕ 8-7-1998 ರಂದು ನೇಮಕಾತಿ ಆದೇಶ ನೀಡಲಾಗಿದೆ. ಉಳಿದ 54 ಹುದ್ದೆಗಳು ಪರಿಶಿಷ್ಟ ಜಾತಿ: ಪಂಗಡಗಳಿಗೆ ಬ್ಯಾಕ್‌ಲಾಗ್ ಹುದ್ದೆಗಳಾಗಿ ಪರಿಗಣಿಸಿ ಆಯ್ಕೆ ಮಾಡಬೇಕಾಗಿದೆ.

ಇ) ಇಲಾಖೆಯಲ್ಲಿ ಖಾಲಿ ಇರುವ ಶುಶ್ರೂಷಕ ಹುದ್ದೆಗಳನ್ನು ನಿಯಮಗಳನ್ವಯ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಬೆಳಗಾಂವ್ ಜಿಲ್ಲೆಯ ಪದವಿ ಕಾಲೇಜಿನಲ್ಲಿ (ಡಿಗ್ರಿ ಕಾಲೇಜು) ಖಾಲಿ ಇರುವ ಹುದ್ದೆಗಳ ಭರ್ತಿ.

2356(2943)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲ್‌ಹೊಂಗಲ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?